**ದಿನಾಂಕ: 07-01-2023 ರಂದು ಬೆಳಗ್ಗೆ 11:00 ಗಂಟೆಗೆ ವಾರ್ಡ್ ಸಂಖ್ಯೆ 202 (ಹಳೆ ವಾರ್ಡ್ ಸಂಖ್ಯೆ 165) ಗಣೇಶ ಮಂದಿರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

***ಹಾಜರಿದ್ದ ಅಧಿಕಾರಿಗಳು:-***

1. ಶ್ರೀ. ಯತೀಶ್. ಎ. ಜೆ – ನೋಡೆಲ್ ಅಧಿಕಾರಿ ಮತ್ತು ಸ.ಕಾ.ನಿ.ಅ (ಬನಶಂಕರಿ) ಉಪವಿಭಾಗ
2. ಶ್ರೀ. ಮೋಹಿತ್. ಆರ್ – ಸಹಾಯಕ ಅಭಿಯಂತರರು (ಕಿಯೋನಿಕ್ಸ್)
3. ಶ್ರೀ. ಪವನ್ – ಕಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀಮತಿ. ಕವಿತ – ಹಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ. ಶ್ರೀಧರ್ – ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ.

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 202 (ಹಳೆ ವಾರ್ಡ್ ಸಂಖ್ಯೆ 165) ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು (ಕಿಯೋನಿಕ್ಸ್) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ವಾರ್ಡ್ ವ್ಯಾಪ್ತಿಯ ಬನಶಂಕರಿ 2ನೇ ಹಂತದ 21ನೇ ಮುಖ್ಯರಸ್ತೆಯಲ್ಲಿ ಪಾದಚಾರಿ ಮಾರ್ಗದ ಒತ್ತುವರಿಯನ್ನು ತೆರವುಗೊಳಿಸಿಕೊಡಬೇಕೆಂದು ಸಾರ್ವಜನಿಕರು ಕೋರಿದರು.

ವಾರ್ಡ್ ವ್ಯಾಪ್ತಿಯ ಬನಶಂಕರಿ 2ನೇ ಹಂತದ 24ನೇ ಅಡ್ಡರಸ್ತೆಯಲ್ಲಿರುವ ಬಾಟ ಶೋ ರೂಂ ಹತ್ತಿರ ಪಾದಚಾರಿ ಮಾರ್ಗದ ಮೇಲೆ ಹೋಟೆಲ್ ಅನ್ನು ನಿರ್ಮಿಸಿರುತ್ತಾರೆ. ಇದರಿಂದ ಪಾದಚಾರಿಗಳಿಗೆ ಓಡಾಡಲು ಕಷ್ಟಕರವಾಗುತ್ತಿರುತ್ತದೆ ಆದ್ದರಿಂದ ಸದರಿ ಹೋಟೆಲ್ ಅನ್ನು ತೆರವುಗೊಳಿಸುವಂತೆ ಸಾರ್ವಜನಿಕರು ಕೋರಿದರು.

ವಾರ್ಡ್ ವ್ಯಾಪ್ತಿಯ ಬನಶಂಕರಿ 2ನೇ ಹಂತದ 24ನೇ ಅಡ್ಡರಸ್ತೆಯಲ್ಲಿರುವ ಬೃಂದಾವನ ಉದ್ಯಾನವನದ ಬಳಿ ಪಾದಚಾರಿ ಮಾರ್ಗದ ಮೇಲೆ ಕಲ್ಲು ಬೆಂಚ್‌ಗಳನ್ನು ನಿರ್ಮಿಸಿರುವುದರಿಂದ ಪಾದಚಾರಿಗಳಿಗೆ ಓಡಾಡಲು ಕಷ್ಟಕರವಾಗುತ್ತಿರುತ್ತದೆ ಆದ್ದರಿಂದ ಸದರಿ ಕಲ್ಲು ಬೆಂಚ್‌ಅನ್ನು ತೆರವುಗೊಳಿಸುವಂತೆ ಸಾರ್ವಜನಿಕರು ಕೋರಿದರು.

ವಾರ್ಡ್ ವ್ಯಾಪ್ತಿಯ ಬನಶಂಕರಿ 2ನೇ ಹಂತದ 24ನೇ ಅಡ್ಡರಸ್ತೆಯಲ್ಲಿ ಪಾದಚಾರಿ ಮಾರ್ಗವನ್ನು ಒತ್ತುವರಿ ಮಾಡಿರುತ್ತಾರೆ, ಇದರಿಂದ ಪಾದಚಾರಿಗಳಿಗೆ ಓಡಾಡಲು ಕಷ್ಟಕರವಾಗುತ್ತಿರುತ್ತದೆ ಆದ್ದರಿಂದ ಸದರಿ ಪಾದಾಚಾರಿ ಮಾರ್ಗದ ಒತ್ತುವರಿಯನ್ನು ತೆರವುಗೊಳಿಸುವಂತೆ ಸಾರ್ವಜನಿಕರು ಕೋರಿದರು.

ವಾರ್ಡ್ ವ್ಯಾಪ್ತಿಯ ಬನಶಂಕರಿ 3ನೇ ಹಂತ, 1ನೇ ಮುಖ್ಯರಸ್ತೆಯಲ್ಲಿರುವ ವೆಂಕಟಾದ್ರಿ ಕಲ್ಯಾಣ ಮಂಟಪದ ಬಳಿ ಅನಧಿಕೃತವಾಗಿ ಶೆಡ್‌ಗಳನ್ನು ನಿರ್ಮಿಸಿಕೊಂಡಿರುತ್ತಾರೆ. ಇದರಿಂದ ಸಾರ್ವಜನಿಕರಿಗೆ ಓಡಾಡಲು ಕಷ್ಟಕರವಾಗಿರುತ್ತದೆ. ಆದುದರಿಂದ ಸದರಿ ಶೆಡ್‌ಗಳನ್ನು ತೆರವುಗೊಳಿಸಲು ಸಾರ್ವಜನಿಕರು ಕೋರಿದರು.

ಪು.ತಿ.ನೋ

ವಾರ್ಡ್ ವ್ಯಾಪ್ತಿಯಲ್ಲಿರುವ 21ನೇ ಮುಖ್ಯರಸ್ತೆಯಲ್ಲಿರುವ ಗಲ್ಲಿ ಕಿಚನ್ ಹೋಟೆಲ್ ನವರು ಹೋಟೆಲ್ ಮುಂಭಾಗದ ಪಾದಾಚಾರಿ ಮಾರ್ಗವನ್ನು ಒತ್ತುವರಿ ಮಾಡಿಕೊಂಡಿರುತ್ತಾರೆ. ಸದರಿಯನ್ನು ತೆರವುಗೊಳಿಸಲು ಸಾರ್ವಜನಿಕರು ತಿಳಿಸಿದರು.

ವಾರ್ಡ್ ಸಂಖ್ಯೆ 202 (ಹಳೆ ವಾರ್ಡ್ ಸಂಖ್ಯೆ 165) ರಲ್ಲಿನ ಎಲ್ಲಾ ಭಾಗಗಳಲ್ಲಿ ಘನತ್ಯಾಜ್ಯ ವಿಲೇವಾರಿ ಕಾರ್ಯ, ಸಿವಿಲ್ ಕಾಮಗಾರಿಗಳು ಹಾಗೂ ಇನ್ನಿತರೆ ಕೆಲಸ ಕಾರ್ಯಗಳು ಸಮರ್ಪಕವಾಗಿ ನಡೆಯುತ್ತಿರುತ್ತದೆ ಎಂದು ಸಮಿತಿ ಸದಸ್ಯರು ಅಭಿಪ್ರಾಯಿಸಿದರು.

ವಾರ್ಡ್ ಸಮಿತಿ ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿನ ಮೂಲಭೂತ ಸೌಕರ್ಯಗಳಾದ ರಸ್ತೆಗುಂಡಿ ಮುಚ್ಚುವಿಕೆ, ಕಟ್ಟಡ ತ್ಯಾಜ್ಯ ವಿಲೇವಾರಿ, ಘನತ್ಯಾಜ್ಯ ವಿಲೇವಾರಿ, ಬೆಸ್ಕಾಂ ಸಂಬಂಧಿತ, ಜಲಮಂಡಳಿ ಸಂಬಂಧಿತ, ಆರೋಗ್ಯ ಇಲಾಖೆ ಹಾಗೂ ಇನ್ನಿತರೆ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಸಮರ್ಪಕ ಕಾರ್ಯನಿರ್ವಹಣೆಯ ಬಗ್ಗೆ ಆಯಾ ಇಲಾಖೆಗಳ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸಾರ್ವಜನಿಕರಿಗೆ ವಿವರಿಸಿದರು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಶ್ರೀ. ಯತೀಶ್. ಎ. ಜೆ, ನೋಡೆಲ್ ಅಧಿಕಾರಿ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡೆಲ್ ಅಧಿಕಾರಿ
ವಾರ್ಡ್ ಸಂಖ್ಯೆ 165
ಗಣೇಶ ಮಂದಿರ